ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
**KARNATAKA LEGISLATIVE ASSEMBLY RESEARCH AND REFERENCE BRANCH**

**ಪತ್ರಿಕಾ ತುಣುಕುಗಳು**
**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT: ಕರ್ನಾಟಕ ವಿಧಾನ ಸಭೆ

ಪತ್ರಿಕೆಯ ಹೆಸರು : NAME OF THE NEWS PAPER: ಕನ್ನಡಪ್ರಭ    ದಿನಾಂಕ : DATE : 22/09/2019

**ಮೇಲಾಟ** ಮಾಲಿನ್ಯ ನಿಯಂತ್ರಣ ಮಂಡಳಿ ನೇಮಕ ತಾಂತ್ರಿಕ ಲೋಪ

# ಮಾಲಿನ್ಯ ನಿಯಂತ್ರಣ ಮಂಡಳಿಗೆ ಡಾ.ಸುಧಾಕರ್ ರಾಜೀನಾಮೆ

22/9/19



• **ಕನ್ನಡಪ್ರಭ ವಾರ್ತೆ** ಬೆಂಗಳೂರು

ತಾಂತ್ರಿಕ ಕಾರಣಗಳಿಂದಾಗಿ ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ (ಕೆಎಸ್‌ಪಿಸಿಬಿ) ಅಧ್ಯಕ್ಷ ಸ್ಥಾನಕ್ಕೆ ಅನರ್ಹ ಶಾಸಕ ಡಾ.ಕೆ. ಸುಧಾಕರ್ ಶನಿವಾರ ರಾಜೀನಾಮೆ ನೀಡಿದ್ದಾರೆ.

ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ ಅಧ್ಯಕ್ಷ ಸ್ಥಾನಕ್ಕೆ ಡಾ.ಕೆ.ಸುಧಾಕರ್ ಅವರನ್ನು ನೇಮಕ ಮಾಡಿರುವುದು ನಿಯಮ ಬಾಹಿರವಾಗಿದೆ ಎಂದು ಸೆ.7ರಂದು ಹೈಕೋರ್ಟ್ ಮೌಖಿಕವಾಗಿ ಅಭಿಪ್ರಾಯ ಪಟ್ಟಿತ್ತು. ಈ ಹಿನ್ನೆಲೆಯಲ್ಲಿ ಸಿಎಂ ಯಡಿಯೂರಪ್ಪ ಅವರನ್ನು ಭೇಟಿಯಾದ ಸುಧಾಕರ್ ಅವರು ತಾಂತ್ರಿಕ ಕಾರಣಗಳಿಂದಾಗಿ ಅಧ್ಯಕ್ಷ ಸ್ಥಾನಕ್ಕೆ ರಾಜೀನಾಮೆ ಸಲ್ಲಿಸಿದ್ದಾರೆ. ಎರಡ್ಮೂರು ದಿನದಲ್ಲಿ ಸುಧಾಕರ್ ಅವರನ್ನೇ ನೇಮಕ ಮಾಡುತ್ತಾರೆಂದು ಮೂಲಗಳು ತಿಳಿಸಿವೆ.

**ಏನಿದು ಪ್ರಕರಣ?:** ಸುಧಾಕರ್ ನೇಮಕಾತಿ ನಿಯಮ ಬಾಹಿರವಾಗಿದೆ ಎಂದು ಆಕ್ಷೇಪಿಸಿ ಶಾಶ್ವತ ನೀರಾವರಿ ಹೋರಾಟ ಸಮಿತಿ ಅಧ್ಯಕ್ಷ ಆರ್. ಆಂಜನೇಯರೆಡ್ಡಿ ಎಂಬುವರು ಹೈಕೋರ್ಟ್‌ಗೆ ಸಾರ್ವಜನಿಕ ಹಿತಾಸಕ್ತಿ ಅರ್ಜಿ ಸಲ್ಲಿಸಿದ್ದರು. ಅರ್ಜಿ ವಿಚಾರಣೆ ನಡೆಸಿದ ನ್ಯಾಯಾಲಯ, ಸುಧಾಕರ್ ಜೂ.20ರಂದು ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ ಅಧ್ಯಕ್ಷರಾಗಿ ನೇಮಕಗೊಂಡಿದ್ದಾರೆ. ಆದರೆ ಸೆ.3ರಂದು ಮುಖ್ಯಮಂತ್ರಿಗಳು ಅನುಮೋದನೆ ನೀಡಿದ್ದಾರೆ, ಇದು ನಿಯಮ ಬಾಹಿರವಾದದ್ದು ಎಂದು ಹೇಳಿತ್ತು.

ವಿಚಾರಣೆ ವೇಳೆ ಸರ್ಕಾರದ ಪರವಾಗಿ ಹಾಜರಿದ್ದ ಅಡ್ವೋಕೇಟ್ ಜನರಲ್ ಪ್ರಭುಲಿಂಗ ನಾವದಗಿ, ನೇಮಕ ಪ್ರಕ್ರಿಯೆ ಬಗ್ಗೆ ಮರು ಪರಿಶೀಲನೆ ನಡೆಸಲು ಅವಕಾಶ ನೀಡಬೇಕು ಎಂದು ನ್ಯಾಯಪೀಠಕ್ಕೆ ಮನವಿ ಮಾಡಿದ್ದರು. ಇದಕ್ಕೆ ನ್ಯಾಯಪೀಠ ತೀವ್ರ ಆಕ್ಷೇಪ ವ್ಯಕ್ತ ಪಡಿಸಿತ್ತು. ನೇಮಕ ಕುರಿತು ವಿವರಣೆ ನೀಡಬೇಕು ಮತ್ತು ಸೆ.20ರೊಳಗೆ ಆಕ್ಷೇಪಣೆ ಸಲ್ಲಿಸಬೇಕು ಎಂದು ಸೂಚನೆ ನೀಡಿ ವಿಚಾರಣೆಯನ್ನು ಸೆ.23ಕ್ಕೆ ಮುಂದೂಡಿತು. ಸೋಮವಾರ ಪ್ರಕರಣದ ವಿಚಾರಣೆ ಇರುವುದರಿಂದ ಸುಧಾಕರ್ ರಾಜೀನಾಮೆ ಸಲ್ಲಿಸಿದ್ದಾರೆ ಎಂದು ತಿಳಿದು ಬಂದಿದೆ.